ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

7

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 - ವಿದ್ಯಾಗಮ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 11/10/2020

# ವಿದ್ಯಾಗಮಕ್ಕೆ ಬ್ರೇಕ್

ಉವಾ 11/10/20

## । ಯೋಜನೆ ಕುರಿತಂತೆ ಅಪಸ್ವರ ಹಿನ್ನೆಲೆಯಲ್ಲಿ ತಾತ್ಕಾಲಿಕ ಸ್ಥಗಿತ
## । ಜನರ ಒತ್ತಡಕ್ಕೆ ಮಣಿದ ಸರ್ಕಾರ । ಮಾಹಿತಿ ಸಂಗ್ರಹಕ್ಕೆ ಆದೇಶ

**ಬೆಂಗಳೂರು:** ಕೊರೊನಾ ಲಾಕ್‌ಡೌನ್ ಕಾಲದಲ್ಲೂ ಸರ್ಕಾರಿ ಶಾಲಾ ಮಕ್ಕಳ ಕಲಿಕೆಯ ನಿರಂತರತೆಗಾಗಿ ಆರಂಭಿಸಿದ್ದ ವಿದ್ಯಾಗಮ ಯೋಜನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

ವಿದ್ಯಾಗಮ ಕಾರ್ಯಕ್ರಮದ ಕುರಿತು ಕೆಲವು ವಲಯಗಳಲ್ಲಿ ಭಿನ್ನ ಅಭಿಪ್ರಾಯಗಳು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಸ್ಥಗಿತಗೊಳಿಸಲು ನಿರ್ದೇಶಿಸಲಾಗಿದೆ. ಶಿಕ್ಷಣ ಇಲಾಖೆಯು ಈ ಸಂಬಂಧ ಜಿಲ್ಲಾವಾರು ಅಂಕಿ ಅಂಶಗಳ ಸ್ವೀಕಾರ ಮಾಡಲಿದೆ ಹಾಗೂ ಅದರ ಸಮರ್ಪಕ ವಿಶ್ಲೇಷಣೆ ಪೂರ್ಣಗೊಳ್ಳುವವರೆಗೆ ಕಾರ್ಯಕ್ರಮವನ್ನು ಸ್ಥಗಿತ ಮಾಡಲು ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಶಿಕ್ಷಣ ಸಚಿವ ಸುರೇಶ್‌ಕುಮಾರ್ ಸೂಚನೆ ನೀಡಿದ್ದಾರೆ.

**ಸುರೇಶ್ ಕುಮಾರ್ ಹೇಳಿದ್ದೇನು?:** ಸಮಾಜದ ಕೆಳಸ್ತರ, ಆರ್ಥಿಕವಾಗಿ ಹಿಂದುಳಿದಿರುವ ಕುಟುಂಬಗಳ ಮಕ್ಕಳ ಹಿತವನ್ನು ಮನದಲ್ಲಿ ಇಟ್ಟುಕೊಂಡು ವಿದ್ಯಾಗಮ ಕಾರ್ಯಕ್ರಮ ರೂಪಿಸಲಾಗಿತ್ತು. ಸದ್ಯ ಸರ್ಕಾರಿ ಶಾಲೆಗಳಿಗೆ ಸೇರಿದ 47 ಲಕ್ಷ ಮಕ್ಕಳು ಈ ಕಾರ್ಯಕ್ರಮದ ಪ್ರಯೋಜನ ಪಡೆಯುತ್ತಿದ್ದಾರೆ. ಎಲ್ಲಿಯೂ ಕಾರ್ಯಕ್ರಮದ ಕಾರಣದಿಂದಲೇ ಕೊರೊನಾ ಸೋಂಕು ಹರಡಿರುವುದು ಅಧಿಕೃತವಾಗಿ ದೃಢಪಟ್ಟಿಲ್ಲ, ಯೋಜನೆಯ ಉಪಯುಕ್ತತೆ, ಅಲ್ಲಿ ಅಳವಡಿಸಿಕೊಳ್ಳಲಾಗಿರುವ ಸುರಕ್ಷತಾ ಕ್ರಮಗಳ ಬಗ್ಗೆ ಯಾರಲ್ಲಿಯೂ ಸಂಶಯ ಬೇಡ. ಆದರೂ, ಶಿಕ್ಷಕರ ಕಾರಣಕ್ಕೆ ಮಕ್ಕಳು ಕೋವಿಡ್ ಸೋಂಕಿತರಾಗಿದ್ದಾರೆಯೇ, ಮಕ್ಕಳಿಂದ ಶಿಕ್ಷಕರಿಗೆ ಅದು ಹರಡಿದೆಯೇ ಎಂಬ ಬಗ್ಗೆ ರಾಜ್ಯಾದ್ಯಂತ ಮಾಹಿತಿ ಸಂಗ್ರಹಣೆಗೆ ಮುಂದಾಗಿದ್ದೇವೆ. ಸಂಪೂರ್ಣ ಮಾಹಿತಿಯ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ವಿದ್ಯಾಗಮ ಕಾರ್ಯಕ್ರಮವನ್ನು ನಿಲ್ಲಿಸಬೇಕು ಎಂಬ ಆಗ್ರಹ ವಿವಿಧ ವಲಯದಿಂದ ಕೇಳಿ ಬಂದಿದೆ. ಈ ಹಿನ್ನೆಲೆಯಲ್ಲಿ ವಿದ್ಯಾಗಮದಿಂದ ಶಿಕ್ಷಕರಿಗೆ, ವಿದ್ಯಾರ್ಥಿಗಳಿಗೆ ಸೋಂಕು ಹರಡಿರುವ ಬಗ್ಗೆ ಮಾಹಿತಿ ಕಲೆ ಹಾಕಲು ಮುಂದಾಗಿದ್ದೇವೆ ಎಂದು ಸಚಿವ ಸುರೇಶ್ ಕುಮಾರ್ ತಿಳಿಸಿದ್ದಾರೆ.

ವಿದ್ಯಾಗಮ ಇರಲಿ;
ಅನುಷ್ಠಾನ ಸುಧಾರಿಸಲಿ » 6

### ಸ್ಥಗಿತವಾಗಿದ್ದು ಏಕೆ?

1. 200ಕ್ಕೂ ಹೆಚ್ಚು ಶಿಕ್ಷಕರ ಸಾವು
2. ಸಾವಿರಕ್ಕೂ ಹೆಚ್ಚು ಶಿಕ್ಷಕರಿಗೆ ಕೊರೊನಾ
3. ಶಿಕ್ಷಕರು, ಮಕ್ಕಳ ಸುರಕ್ಷತೆಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಗೊಂದಲ
4. ವಠಾರ, ಮರಗಳ ಕೆಳಗೆ ಪಾಠ ಮಾಡುವುದಕ್ಕೆ ಆಕ್ಷೇಪ



### ಲೋಪ ಸರಿಪಡಿಸಿದರೆ ಉತ್ತಮ

ಉ ಓದುಗರ ಅಭಿಮತ

ವಿದ್ಯಾಗಮ ವ್ಯವಸ್ಥೆಯ ಲೋಪದೋಷದ ಬಗ್ಗೆ ಉದಯವಾಣಿ ಅಭಿಪ್ರಾಯ ಸಂಗ್ರಹದಲ್ಲಿ ಶಿಕ್ಷಕರು ಗಮನಸೆಳೆದಿದ್ದಾರೆ...

ಎಲ್ಲೋ ಕೆಲವು ಶಿಕ್ಷಕರಿಗೆ ಕೊರೊನಾ ಸೋಂಕು ಬಂದಿದೆ ಎಂಬ ಕಾರಣಕ್ಕೆ ಇಡೀ ಕಾರ್ಯಕ್ರಮವನ್ನೇ ಸ್ಥಗಿತ ಮಾಡುವುದು ಸರಿಯಲ್ಲ. ಸರ್ಕಾರ ಖಾಸಗಿ ಲಾಬಿಗೆ ಮಣಿಯಬಾರದು.

• ವೈ.ಬಿ.ಅಮ್ಜಾದ್ ಖಾನ್, ಸಹ ಶಿಕ್ಷಕ, ಪಾಲನಜೋಗಿ ಹಳ್ಳಿ, ದೊಡ್ಡಬಳ್ಳಾಪುರ

ಜ್ವರವಿರುವ ಮಕ್ಕಳು, ಶಿಕ್ಷಕರು ಪಾಲ್ಗೊಳ್ಳದಂತೆ ಮುಖ್ಯ ಶಿಕ್ಷಕರು ಅಥವಾ ಅಧಿಕಾರಿಗಳು ನೋಡಿಕೊಳ್ಳಬೇಕು. ಪರೀಕ್ಷೆ ರಹಿತ ಶೈಕ್ಷಣಿಕ ವರ್ಷ ಎಂದು ಘೋಷಿಸಿದರೆ, ಮಕ್ಕಳಲ್ಲಿ ನಾವು ಮೂಡಿಸಿರುವ ಕಲಿಕಾಸಕ್ತಿ ನಶಿಸಿ ಹೋಗುತ್ತದೆ.

• ಸುಭಿಕ್ಷಾ, ಸರ್ಕಾರಿ ಪ್ರೌಢಶಾಲಾ ವಿಭಾಗ ಗೋಳಿಯಂಗಡಿ, ಬ್ರಹ್ಮಾವರ ವಲಯ

ಕಡಿಮೆ ಶಿಕ್ಷಕರು ಹಾಗೂ ಹೆಚ್ಚು ವಿದ್ಯಾರ್ಥಿಗಳು ಇರುವಲ್ಲಿ ಅನುಷ್ಠಾನದ ಸಮಸ್ಯೆ ಆಗುತ್ತಿದೆ. ಶಿಕ್ಷಕರ ಸಂಖ್ಯೆ ಹೆಚ್ಚಿಸಬೇಕು.

• ಸೈಯದ್ ಅಲೀ, ಸರ್ಕಾರಿ ಶಾಲಾ ಶಿಕ್ಷಕ, ಜೇವರ್ಗಿ

ಯೋಜನೆ ತುಂಬಾ ಚೆನ್ನಾಗಿದೆ. ಆದರೆ, ಗುಡಿ ಗುಡಾರಗಳಲ್ಲಿ ಮಾಡುವುದು ಸ್ವಲ್ಪ ಕಷ್ಟ. ಅಲ್ಲಿ ಮಕ್ಕಳಿಗೆ ಮತ್ತು ಶಿಕ್ಷಕರಿಗೆ ಯಾವುದೇ ರೀತಿಯ ಅನುಕೂಲಗಳು ಇಲ್ಲ. ಲೋಪ ಸರಿಪಡಿಸಿದರೆ ಇನ್ನಷ್ಟು ಉತ್ತಮವಾಗಿ ಅನುಷ್ಠಾನ ಮಾಡಬಹುದು

• ಕೆ.ಜಿ.ಅರುಂಧತಿ, ಸರ್ಕಾರಿ ಶಾಲಾ ಶಿಕ್ಷಕಿ, ಸಂಡೂರು